# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 791(1023) |
| ಸದಸ್ಯರ ಹೆಸರು | : | ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16.12.2025 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು. |

| | ಪ್ರಶ್ನೆ | ಉತ್ತರ |
|---|---|---|
| ಅ) | ಮಹಾನಗರ ಪಾಲಿಕೆಯ ನೌಕರರ ವಿವಿಧ ಬೇಡಿಕೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದರೆ, ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ಬಂದಿದೆ.<br><br>ಮಹಾನಗರ ಪಾಲಿಕೆಯ ಹಾಗೂ ಸ್ಥಳೀಯ ಸಂಸ್ಥೆಗಳ ನೌಕರರ ವಿವಿಧ ಬೇಡಿಕೆಗಳ ಕುರಿತು ಪೌರಾಡಳಿತ ನಿರ್ದೇಶನಾಲಯದಿಂದ ಪ್ರಸ್ತಾವನೆ ಸ್ವೀಕೃತಗೊಂಡಿದ್ದು, ಸದರಿ ಪ್ರಸ್ತಾವನೆಯ ಕುರಿತು ಕಡತ ಸಂಖ್ಯೆ: ನಅಇ 104 ಟಿಎಂಎಸ್ 2025ನ್ನು ಆರ್ಥಿಕ ಇಲಾಖೆಯ ಅಭಿಪ್ರಾಯಕ್ಕಾಗಿ ಸಲ್ಲಿಸಲಾಗಿದ್ದು, ಪರಿಶೀಲನೆಯಲ್ಲಿರುತ್ತದೆ. |
| ಆ) | ಯಾವ ಕಾಲಮಿತಿಯಲ್ಲಿ ನೌಕರರ ವಿವಿಧ ಬೇಡಿಕೆಗಳನ್ನು ಈಡೇರಿಸಲಾಗುವುದು; | ಮಹಾನಗರಪಾಲಿಕೆಗಳ ಅಧಿಕಾರಿ / ನೌಕರರ ಬೇಡಿಕೆಗಳ ಪೈಕಿ:ಮಹಾನಗರ ಪಾಲಿಕೆಯ ಖಾಯಂ ಅಧಿಕಾರಿ / ನೌಕರರ ವೈದ್ಯಕೀಯ ವೆಚ್ಚದ ಬಿಲ್ಲುಗಳ ಮೊತ್ತವನ್ನು ರೂ.1,00,000/- (ಒಂದು ಲಕ್ಷ) ದಿಂದ ರೂ.2,00,000/- (ಎರಡು ಲಕ್ಷಗಳ) ವರೆಗಿನ ಮೊತ್ತವನ್ನು ಮರುಪಾವತಿಸುವ ಅಧಿಕಾರವನ್ನು ಮಹಾನಗರಪಾಲಿಕೆಗಳ ಆಯುಕ್ತರು ಗಳಿಗೆ ಪ್ರತ್ಯಾಯೋಜಿಸುವ ಬಗ್ಗೆ ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳಿಂದ ಕ್ರೋಢೀಕೃತ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದ್ದು, ಪೌರಾಡಳಿತ ನಿರ್ದೇಶನಾಲಯದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. |
| ಇ) | ಈಡೇರಿಸಲಾದ ಬೇಡಿಕೆಗಳು ಯಾವುವು; ಮತ್ತು ಇದುವರೆಗೆ ಈಡೇರಿಸಲಾಗದ ಬೇಡಿಕೆಗಳ ಕುರಿತು ಸರ್ಕಾರದ ನಿಲುವೇನು? | ರಾಜ್ಯದ ಮಹಾನಗರಪಾಲಿಕೆಗಳ ವೃಂದ ಮತ್ತು ನೇಮಕಾತಿ ನಿಯಮಗಳು 2011 ಕ್ಕೆ ಸಮಗ್ರ ತಿದ್ದುಪಡಿ ಮಾಡುವ ಕುರಿತು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. |

**ಸಂಖ್ಯೆ: ನಅಇ 334 ಎಂಎನ್‌ಇ 2025 (ಇ)**

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಹಾಗೂ ನಗರ ಯೋಜನಾ
ಸಚಿವರು